ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ 11/ಇಎಪಿ/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com
ದಿನಾಂಕ:05.07.2024

## ಜ್ಞಾಪನ

**ವಿಷಯ: ಸಿ-20 ಪಠ್ಯಕ್ರಮದ ಗ್ರೇಡ್ ಕಾರ್ಡ್‌ಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಮಾಹಿತಿ ನೀಡದಿರುವ ಬಗ್ಗೆ.**

**ಉಲ್ಲೇಖ: ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ 11/ಇಎಪಿ/2023 ದಿನಾಂಕ:06.05.2024**

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಸಿ-20ಪಠ್ಯಕ್ರಮದಲ್ಲಿ 2020-21 ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ಎಲ್ಲಾ ವಿಷಯಗಳಲ್ಲೂ ಉತ್ತೀರ್ಣರಾಗಿ ಡಿಪ್ಲೋಮ ವಿದ್ಯಾಭ್ಯಾಸ ಪೂರ್ಣಗೊಳಿಸಿರುವ ವಿದ್ಯಾರ್ಥಿಗಳ ಎಲ್ಲಾ ಸೆಮಿಸ್ಟರ್ ಗ್ರೇಡ್ ಕಾರ್ಡ್‌ಗಳನ್ನು ಉಲ್ಲೇಖಿತ ಪತ್ರದೊಂದಿಗೆ ಲಗತ್ತಿಸಿ ರವಾನಿಸಲಾಗಿತ್ತು.

ಸದರಿ ಪತ್ರದಲ್ಲಿ ಗ್ರೇಡ್ ಕಾರ್ಡ್‌ಗಳನ್ನು ಕಡ್ಡಾಯವಾಗಿ ದಿನಾಂಕ:31.05.2024 ರೊಳಗಾಗಿ ವಿದ್ಯಾರ್ಥಿಗಳಿಗೆ ವಿತರಿಸಿ ಅದರ ಸಂಪೂರ್ಣ ವರದಿಯನ್ನು ಹಾಗೂ ಗ್ರೇಡ್ ಕಾರ್ಡ್‌ಗಳನ್ನು ಸ್ವೀಕರಿಸಿದ ಬಗ್ಗೆ ಸ್ವೀಕೃತಿ ಪತ್ರದೊಂದಿಗೆ ಸಲ್ಲಿಸಲು ಸೂಚಿಸಲಾಗಿತ್ತು.

ಆದರೆ ಇದುವರೆಗೂ ಹೆಚ್ಚಿನ ಸಂಸ್ಥೆಗಳಿಂದ ಸದರಿ ಮಾಹಿತಿಯು ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಎಲ್ಲಾ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳಿಗೂ ವಿದ್ಯಾರ್ಥಿಗಳಿಗೆ ಗ್ರೇಡ್ ಕಾರ್ಡ್‌ಗಳನ್ನು ವಿತರಿಸಿರುವ ಬಗ್ಗೆ ವರದಿ ಹಾಗೂ ಗ್ರೇಡ್ ಕಾರ್ಡ್‌ಗಳನ್ನು ಸ್ವೀಕರಿಸಿರುವ ಬಗ್ಗೆ ಸ್ವೀಕೃತಿ ಪತ್ರವನ್ನು ದಿನಾಂಕ:12.072024 ರೊಳಗಾಗಿ ಸಲ್ಲಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಪ್ರಾಂಶುಪಾಲರನ್ನು ನೇರ ಜವಾಬ್ದಾರರನ್ನಾಗಿಸಿ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ
ಬೆಂಗಳೂರು.

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು
- ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ